ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಆಯವ್ಯಯ:ಹೊ.ಗು.ನೌ.ಅ.ಬಿ:19:2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:09.05.2022.

## ಸುತ್ತೋಲೆ

ವಿಷಯ: ಕಛೇರಿ/ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಹೊಂದಿರುವವರಿಗೆ ಅನುದಾನ ಬಿಡುಗಡೆಗೆ ಅಗತ್ಯ ಮಾಹಿತಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಕಾರ್ಯಾದೇಶ ಸಂಖ್ಯೆ:ಕಾಶಿಇ:ನೇವಿ-1:ಹೊಗುಅ:168: 2019-20, ದಿನಾಂಕ:20.12.2021.

******

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಈ ಕಛೇರಿಯ ಕಾರ್ಯಾದೇಶದನ್ವಯ ಜೆಮಿನಿ ಸೆಕ್ಯೂರಿಟಿ ಮತ್ತು ಅಲೈಡ್ ಸರ್ವಿಸಸ್, ದಾವಣಗೆರೆ ಏಜೆನ್ಸಿ ಮುಖಾಂತರ ಆಯ್ಕೆಯಾಗಿ ಇಲಾಖಾ ವ್ಯಾಪ್ತಿಯ ಪ್ರಾದೇಶಿಕ ಕಛೇರಿ ಮತ್ತು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್ಸ್ ಮತ್ತು ಗ್ರೂಪ್ ಡಿ ನೌಕರರುಗಳಿಗೆ ಫೆಬ್ರವರಿ-2022ರ ಮಾಹೆಯ ವೇತನ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಲಾಗಿತ್ತು.

ಪ್ರಸ್ತುತ ಮಾರ್ಚ್-2022 ಮತ್ತು ಏಪ್ರಿಲ್ -2022ರ ಮಾಹೆಗಳ ವೇತನಕ್ಕಾಗಿ ಅನುದಾನ ಬಿಡುಗಡೆ ಮಾಡಬೇಕಾಗಿದ್ದು, ಅಗತ್ಯ ಮಾಹಿತಿಯನ್ನು ಇಲಾಖಾ ಜಾಲತಾಣದಲ್ಲಿರುವ ಗೂಗಲ್ ಫಾರಂ ನಲ್ಲಿ ನಮೂದಿಸಿ ದಿನಾಂಕ:11.05.2022ರ ಒಳಗಾಗಿ ಸಲ್ಲಿಸಲು ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು.

ಪ್ರತಿಯನ್ನು:

ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಿದೆ.